## ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್

# ಕರ್ನಾಟಕ ಸರ್ಕಾರಿ ಶಾಲೆಗಳ ಶಿಕ್ಷಕ/ ಶಿಕ್ಷಕಿಯರಿಂದ ಯೋಜನಾ ಪ್ರಸ್ತಾವನೆಗಳನ್ನು ಆಹ್ವಾನಿಸಿದೆ

**ಪ್ರಸ್ತಾವನೆಗಳನ್ನು ಸಲ್ಲಿಸಲು ಕಡೆಯ ದಿನಾಂಕ: 13th July 2018**

ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಐ.ಎಫ್.ಎ) ಕರ್ನಾಟಕದ ಸರ್ಕಾರಿ ಶಾಲೆಗಳಲ್ಲಿ ಕಲಾ ಶಿಕ್ಷಣ ನೀಡಲು ಶಾಲಾ ಶಿಕ್ಷಕ/ ಶಿಕ್ಷಕಿಯರಿಂದ ಯೋಜನಾ ಪ್ರಸ್ತಾವನೆಗಳನ್ನು ಆಹ್ವಾನಿಸಿದೆ. ಇದು ಈಗಾಗಲೇ ಚಾಲ್ತಿಯಲ್ಲಿರುವ 'ಕಲಿ-ಕಲಿಸು' ಯೋಜನೆಯ ಮುಂದುವರಿಕೆ ಭಾಗವಾಗಿದೆ. ಶಿಕ್ಷಕರು, ಶಾಲಾ ಸಮುದಾಯ ಹಾಗೂ ಸ್ಥಳೀಯ ಕಲಾವಿದರ ಸಂಬಂಧವನ್ನು ಗಟ್ಟಿಗೊಳಿಸುವುದು ಈ ಯೋಜನೆಯ ಮುಖ್ಯ ಗುರಿ.

ಈ ಅನುದಾನದ ಮುಖ್ಯ ಉದ್ದೇಶವೆಂದರೆ ಶಿಕ್ಷಕರು ತಮ್ಮ ವಿಷಯದ ಪರಿಮಿತಿಯ ಚೌಕಟ್ಟನ್ನು ದಾಟಿ, ಕಲಾ ಪ್ರಕಾರಗಳನ್ನು ತಾವು ಕಲಿಸುತ್ತಿರುವ ವಿಷಯಗಳಲ್ಲಿ ಅಳವಡಿಸಿಕೊಳ್ಳುವುದು, ಈ ಮೂಲಕ ಎಲ್ಲಾ ವಿಷಯಗಳ ಪಠ್ಯಕ್ರಮದಲ್ಲಿ ಹಾಗೂ ತರಗತಿಯಲ್ಲಿ ಸ್ಥಳೀಯ ಕಲಾಪ್ರಕಾರಗಳನ್ನು ಅಳವಡಿಸಿಕೊಂಡು ಕಲಾವಿದರಿಗೆ ಹಾಗು ಶಿಕ್ಷಕರಿಗೆ ಹೊಸ ಕಲಿಕೆಯ ಅವಕಾಶವನ್ನು ಕಲ್ಪಿಸುವುದಾಗಿದೆ. ಅದರ ಜೊತೆಗೆ ಪರಿಸರ ಹಾಗೂ ಜಾನಪದ ಸಂಸ್ಕೃತಿಯನ್ನು ಶಾಲಾ ಶಿಕ್ಷಣದಲ್ಲಿ ಮತ್ತೆ ಪರಿಚಯ ಮಾಡುವ ಕೆಲಸ ಆಗಿದೆ.

ಅನುದಾನದ ಅವಧಿಯ ನಂತರವೂ ಯೋಜನಾಕಾರ್ಯಕ್ರಮವು ಮುಂದುವರೆಯಬಹುದಾದ ಎಲ್ಲಾ ಸಾಧ್ಯತೆಗಳನ್ನು ಐ.ಎಫ್.ಎ ನಿರೀಕ್ಷಿಸುತ್ತದೆ.

ಈ ಅನುದಾನಗಳ ಬಗೆಗೆ ಹೆಚ್ಚಿನ ಮಾಹಿತಿಗಾಗಿ ಈ ಲಿಂಕ್ ಗೆ ಭೇಟಿ ನೀಡಿ :

https://sites.google.com/site/kalikalisu/project/phase-4---2012

**ಈ ಯೋಜನಾ ಪ್ರಸ್ತಾವನಕ್ಕೆ ಬೇಕಾದ ಅರ್ಹತೆ:**

ಸರ್ಕಾರಿ ಶಾಲಾ ವಿಷಯ ಶಿಕ್ಷಕರು, ಕಲಾಶಿಕ್ಷಕರು, ಜಿಲ್ಲಾ ಶಿಕ್ಷಣ ತರಬೇತಿ ಕೇಂದ್ರದ(DIET) ಉಪನ್ಯಾಸಕರು.

**ಯೋಜನೆಯ ವ್ಯಾಪ್ತಿ :**

ಯೋಜನೆಯ ವ್ಯಾಪ್ತಿಯಲ್ಲಿ ಕೆಳಕಂಡ ಯಾವುದಾದರೊಂದು ಅಂಶವಿರಬೇಕು.

- ಪೋಷಕರು, ವಿದ್ಯಾರ್ಥಿಗಳು, ಶಿಕ್ಷಕರು, ಕಲಾಸೇವೆಯಲ್ಲಿ ತೊಡಗಿರುವವರೂ ಒಳಗೊಂಡಂತೆ ಇನ್ನೂ ಹಲವು ಪಾಲುದಾರರನ್ನು ಕಲಾ ಯೋಜನೆಯ ಪರಿಧಿಯಲ್ಲಿ ತರಬೇಕು.
- ಭೋದನೆಯಲ್ಲಿ ಸ್ಥಳೀಯ ಹಾಗೂ ಪ್ರಾಂತೀಯ ಕಲಾ ಪ್ರಕಾರಗಳನ್ನು ಬಳಸಿಕೊಳ್ಳುವ ಮೂಲಕ ಕಲಿಕೆಯನ್ನು ಶ್ರೀಮಂತಗೊಳಿಸುವುದು.

- ವಿದ್ಯಾರ್ಥಿ ಕೇಂದ್ರಿತ ಕಲಿಕೆಗೆ ಪ್ರೋತ್ಸಾಹಿಸುವುದು. ಉದಾಹರಣೆಗೆ ಕಲಾ ಪ್ರಕಾರಗಳನ್ನು ಪರಿಚಯಿಸಿ, ಮಕ್ಕಳು ವಿವಿಧ ಕಲಾ ಪ್ರಕಾರಗಳಲ್ಲಿ ನಿರಂತರವಾಗಿ ತೊಡಗುವಂತೆ ಪ್ರೋತ್ಸಾಹಿಸುವುದು. ಅವುಗಳ ಕುರಿತು ನಿತ್ಯ ಅನುಭಾವಿಸುವುದು ಹಾಗೂ ಹೆಚ್ಚೆಚ್ಚು ಅಭ್ಯಸಿಸುವ ಕೆಲಸ ಆಗುವಂತೆ ಮಾಡುವುದು (ರಂಗ, ಚಿತ್ರಕಲೆ, ಸಿನಿಮಾ, ಸಾಹಿತ್ಯ, ಛಾಯಾಚಿತ್ರ, ಸಂಗೀತ ಇತ್ಯಾದಿ)
- ಯೋಜನೆಯು ಕಲಾ ಕಲಿಕೆಯ ಮೂಲಕ ಸಾಮಾಜಿಕ ನ್ಯಾಯ ಮತ್ತು ಪರಿಸರ ಸಂಬಂಧಿ ಅರಿವು ಮೂಡಿಸಲು ಶಾಲಾ ಸಮುದಾಯವನ್ನು ಪ್ರೇರೇಪಿಸುವಲ್ಲಿ ಸಹಕಾರಿಯಾಗಬೇಕು.

## ಯೋಜನಾ ಪ್ರಸ್ತಾವನೆ ಸಲ್ಲಿಸುವ ಪ್ರಕ್ರಿಯೆಯ ಮಾರ್ಗಸೂಚಿ:

- ಯೋಜನೆಗೆ ಸಂಬಂದಪಟ್ಟ ಪ್ರಶ್ನೆಗಳಿದ್ದಲ್ಲಿ, ನಿಮ್ಮ ಹೊಳಹುಗಳ ಬಗ್ಗೆ ಚರ್ಚಿಸಬಯಸಿದಲ್ಲಿ ಅಥವಾ ನಿಮ್ಮ ಕರಡು ಪ್ರಸ್ತಾವನೆಯನ್ನು ನಮಗೆ ಕಳುಹಿಸ ಬಯಸಿದಲ್ಲಿ, June 15th, 2018ರ ಒಳಗೆ ನಮ್ಮನ್ನು ಸಂಪರ್ಕಿಸಿ.
- ನಿಮ್ಮ ಅಂತಿಮ ಪ್ರಸ್ತಾವನೆಯು ಲಕೋಟೆಯಲ್ಲಿ July 13th, 2018ರ ಒಳಗೆ ನಮಗೆ ಸೇರಬೇಕು.
- ಯೋಜನೆಯ ನಿರೀಕ್ಷಿತ ಕಾಲಾವಧಿ ಕನಿಷ್ಠ ಒಂಬತ್ತು ತಿಂಗಳದ್ದಾಗಿರಬೇಕು ಹಾಗೂ ಗರಿಷ್ಟ ೧೮ ತಿಂಗಳ ಅವಧಿಯದ್ದಾಗಿರಬೇಕು.
- ನಿಮ್ಮ ಯೋಜನೆಯನ್ನು ಕನ್ನಡ, ಉರ್ದು, ಹಿಂದಿ, ಹಾಗು ಇಂಗ್ಲಿಷ್ ಭಾಷೆಯಲ್ಲಿ ಬರೆಯಬಹುದು.
- ಕೊನೆಯ ದಿನಾಂಕದ ಮೊದಲು ನಿಮ್ಮ ಪ್ರಸ್ತಾವನೆಯು ಐ.ಎಫ್.ಎ ಗೆ ತಲುಪಲು ನೀವೇ ಜವಾಬ್ದಾರರಾಗಿರುತ್ತೀರಿ. ತಡವಾಗಿ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
- ನಿಮ್ಮ ಪ್ರಸ್ತಾವನೆ ಆಯ್ಕೆಯಾದಲ್ಲಿ ನಿಗಧಿಪಡಿಸಿದ ದಿನಾಂಕದಂದು ಖುದ್ದು ಚರ್ಚೆಗೆ ಬರಬೇಕು.
- 31st August, 2018ಕ್ಕೆ ಅನುದಾನದ ಪಟ್ಟಿಯನ್ನು ನಿರೀಕ್ಷಿಸಬಹುದು.

ನಿಮ್ಮ ಯೋಜನೆಯು ಈ ಕೆಳಕಂಡ ವಿಷಯಗಳ ವಿವರಗಳನ್ನು ಒಳಗೊಂಡಿರಬೇಕು.

1. ಯೋಜನೆಯ ಉದ್ದೇಶಗಳು.
2. ಕಾರ್ಯ ಯೋಜನೆಗಳ ವಿವರ.
3. ಯೋಜನೆಯಿಂದ ಬರಬಹುದಾದ ಅಪೇಕ್ಷಿತ ಫಲಿತಾಂಶಗಳು.
4. ಖರ್ಚು- ವೆಚ್ಚಗಳ ವಿವರ.

## ಬಜೆಟ್:

- ರೂ. **1,00,000**/- ವರೆಗೆ ಧನಸಹಾಯ ದೊರೆಯುತ್ತದೆ.
- ಪ್ರತಿ ಬಜೆಟ್ ಯೋಜನೆಗೆ ಸಂಬಂದಿಸಿದ ನಿರ್ಧಿಷ್ಟ ಖರ್ಚು ವೆಚ್ಚಗಳ ವಿವರ ಹೊಂದಿರಬೇಕು.

- ಯೋಜನೆಗೆ ಸಂಬಂದಿಸಿದ ವೈಯಕ್ತಿಕ ಗೌರವಧನ, ಪ್ರಯಾಣ ಹಾಗು ಚಟುವಟಿಕೆಗಳ ವಿವರ ಹೊಂದಿರಬೇಕು. ಪ್ರಸ್ತಾವನೆಗೆ ಸಂಬಂದಿಸಿದಂತೆ ಅಗತ್ಯವಿರುವ ನೂತನ ಉಪಕರಣಗಳನ್ನು ಮತ್ತು ವಸ್ತುಗಳನ್ನು ಕೊಳ್ಳಲು ಅವಕಾಶವಿರುವುದಿಲ್ಲ.
- ಸಾಂಸ್ಥಿಕ ಖರ್ಚು ವೆಚ್ಚಗಳು, ಕಟ್ಟಡದ ಖರ್ಚು ವೆಚ್ಚಗಳು ಮತ್ತು ಹೊಸ ಕಾಮಗಾರಿಗಳಿಗಾಗಿ ಅನುದಾನವಿರುವುದಿಲ್ಲ.
- ಲೆಕ್ಕ ಪರಿಶೀಲಕರಿಗಾಗಿ ನಿಗಧಿ ಪಡಿಸಿರುವ ರೂ. 2,000/- ನ್ನು ಯೋಜನೆಯ ಖರ್ಚು ವೆಚ್ಚಗಳಲ್ಲಿ ಸೂಚಿಸಿರಬೇಕು.

**ಅನುದಾನಕ್ಕೆ ಆಯ್ಕೆಯಾದ ಶಿಕ್ಷಕರಿಂದ ನಿರೀಕ್ಷೆಗಳೇನೆಂದರೆ :**

- ಮುಂದಿನ ದಿನಗಳಲ್ಲಿ ಅನುಷ್ಠಾನಕ್ಕೆ ತರಬಹುದಾದ ಒಂದು ನೂತನ ಪಠ್ಯಕ್ರಮದ ಅಭಿವೃದ್ಧಿಪಡಿಸುವಿಕೆ. ಅನುದಾನ ಸಂಬಂದಿತ ಚಟುವಟಿಕೆಗಳು, ಎದುರಾದ ಸಮಸ್ಯೆಗಳು ಮತ್ತು ಕಲಿಕೆಗಳ ದಾಖಲೆ.
- ಯೋಜನೆಯು ಸರಿಯಾದ ಕ್ರಮದಲ್ಲಿ ನಡೆಯುತ್ತಿರುವುದನ್ನು ತೋರಿಸಲು ಕಾಲಕಾಲಕ್ಕೆ ಸರಿಯಾದ ದಾಖಲೆಗಳ ಸಲ್ಲಿಕೆ.( ದಾಖಲೆಗಳು : ಛಾಯಾಚಿತ್ರ/ಆಡಿಯೋ/ವಿಡಿಯೋ/ ವರದಿಯ ರೂಪದಲ್ಲಿರಬೇಕು)
- ಯೋಚನಾ ಅವಧಿಯಲ್ಲಿ ಮಧ್ಯಂತರ ವರದಿ ಹಾಗು ಯೋಜನೆಯ ಕೊನೆಯಲ್ಲಿ ಸಮಗ್ರ ವರದಿ.
- ಯೋಜನಾ ಅವಧಿಯ ನಂತರ ಹಣಕಾಸಿನ ವರದಿಯ ಜೊತೆ ಯೋಜನೆಯ ಸಂಪೂರ್ಣ/ಸವಿಸ್ತಾರ ವರದಿ.

ನಿಮ್ಮ ಅನುಮಾನಗಳಿಗೆ /ಪ್ರಶ್ನೆಗಳಿಗೆ/ ಅಗತ್ಯ ಮಾಹಿತಿಗಾಗಿ ಈ ಕೆಳಗಿನ ಇ-ಮೇಲ್ ಐ.ಡಿಗೆ, ಅಥವಾ ಪತ್ರ ಮುಖೇನ ಕೆಳಕಂಡ ವಿಳಾಸಕ್ಕೆ ಬರೆಯಿರಿ.

ನಿಮ್ಮ ಪ್ರಸ್ತಾವನೆಗಳನ್ನು ಹಾಗು ಸಂದೇಹಗಳನ್ನು krishna@indiaifa.org ಗೆ ಕಳುಹಿಸಿಕೊಡಲು ಕೋರಲಾಗಿದೆ

ಕೃಷ್ಣಮೂರ್ತಿ ಟಿ ಎನ್
ಕಾರ್ಯಕ್ರಮ ನಿರ್ವಾಹಕ - ಕಲಾ ಶಿಕ್ಷಣ
ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್
ಅಪೂರ್ವ ನೆಲಮಹಡಿ, ಸಂಖ್ಯೆ ೨೫೯, ೪ನೇ ಅಡ್ಡ ರಸ್ತೆ, ರಾಜ ಮಹಲ್ ವಿಲಾಸ್, ಎರಡನೇ ಹಂತ, ಬೆಂಗಳೂರು - ೫೬೦೦೯೪
ದೊರವಾಣಿ : 8762954080

The Arts Education programme has been supported by Citi India since 2016. For more information on Kali-Kalisu follow this link:

http://www.indiaifa.org/programmes/arts-education.html